ಚರ್ಚೆ ಇಂದಿಗೆ ಮುಗಿಯಿತು. ನಾಳೆ ಇದಕ್ಕೆ ಉತ್ತರವನ್ನು ಸಂಬಂಧಪಟ್ಟ ಮಂತ್ರಿಗಳು ಕೊಡುತ್ತಾರೆ. ಈಗ ಒಂದು ಪ್ರಕಟಣೆ.

7. ಪ್ರಕಟಣೆ

ವಿಷಯ : ವಿಧಾನ ಸಭೆಯ ಕಾರ್ಯಕಲಾಪಗಳ ಸಮಿತಿಯ ತೀರ್ಮಾನಗಳ ಬಗ್ಗೆ

ಉಪಾಧ್ಯಕ್ಷರು :

ದಿನಾಂಕ : 24/7/2002 ರಂದು ನಡೆದ ವಿಧಾನ ಸಭೆಯ ಕಾರ್ಯಕಲಾಪಗಳ ಸಮಿತಿಯ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿರುವುದು.

1. ದಿನಾಂಕ : 25.7.2002 ರಂದು ಸದನವು ಬೆಳಿಗ್ಗೆ 11.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಭೆ ನಡೆಸಿ ಪ್ರಶ್ನೋತ್ತರ ಮತ್ತು ಬೇಡಿಕೆಗಳ ಮೇಲೆ ಚರ್ಚೆಗೆ ಉತ್ತರ.
2. ದಿನಾಂಕ : 26.7.2002 ರಂದು ಸದನವು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಪ್ರಶ್ನೋತ್ತರ ಮತ್ತು ಬೇಡಿಕೆಗಳ ಮೇಲೆ ಚರ್ಚೆ ನಡೆಸಲಾಗುವುದು.
3. ದಿನಾಂಕ : 29.7.2002 ರಂದು ಸದನವು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 7.00 ಗಂಟೆಯವರೆಗೆ ಸಭೆ ಸೇರಿ ಪ್ರಶ್ನೋತ್ತರ ಹಾಗೂ ಬೇಡಿಕೆಗಳ ಮೇಲೆ ಚರ್ಚೆಯನ್ನು ಮುಕ್ತಾಯ ಗೊಳಿಸುವುದು.
4. ದಿನಾಂಕ : 30.7.2002 ರಂದು ಸದನವು ಬೆಳಿಗ್ಗೆ 10.00 ಗಂಟೆಗೆ ಸಭೆ ಸೇರಿ ಬೇಡಿಕೆಗಳ ಮೇಲೆ ಮಾನ್ಯ ಮುಖ್ಯ ಮಂತ್ರಿಗಳಿಂದ ಉತ್ತರ, ಧನ ವಿನಿಯೋಗ ವಿಧೇಯಕಗಳು ಹಾಗೂ ಅನುಪೂರಕ ಅಂದಾಜುಗಳನ್ನು ಮಂಡಿಸಿ ಒಪ್ಪಿಗೆ ಪಡೆಯಲಾಗುವುದು.
5. ದಿನಾಂಕ : 31.7.2002, 1.8.2002 ರಂದು 2.8.2002 ರಂದು ಸಭೆ ಸೇರಿ ಬಾಕಿ ಇರುವ ವಿಧೇಯಕಗಳನ್ನು ಪರ್ಯಾಲೋಚಿಸಿ ಅಂಗೀಕರಿಸುವುದು ಹಾಗೂ ಉಳಿದ ವಿಷಯಗಳ ಬಗ್ಗೆ ಚರ್ಚೆ ನಡೆಸಲಾಗುವುದು.
6. ಸದನದ ಮುಂದಿನ ಕಾರ್ಯಕಲಾಪಗಳ ಬಗ್ಗೆ ದಿನಾಂಕ : 29.7.2002 ರಂದು ಸಂಜೆ 4.00 ಗಂಟೆಗೆ ವಿಧಾನ ಸಭೆಯ ಕಾರ್ಯಕಲಾಪಗಳ ಸಮಿತಿಯು ಸಭೆ ಸೇರಿ ತೀರ್ಮಾನಿಸಲಾಗುವುದು.

ಇದಕ್ಕೆ ಸದನದ ಸಹಮತಿ ಇದೆಯೆಂದು ಭಾವಿಸುತ್ತೇನೆ.

ಈಗ ಸದನವನ್ನು 11-00 ವರೆಗೆ ಮುಂದೂಡುತ್ತಿದ್ದೇನೆ.

(ಸದನವು ಸಂಜೆ 6 ಗಂಟೆ 40 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 25ನೇ ಜುಲೈ 2002ರ ಗುರುವಾರದಂದು ಬೆಳಿಗ್ಗೆ 11-00 ಗಂಟೆಗೆ ಸೇರಲು ನಿಶ್ಚಯಿಸಿತು).

(+ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)